**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿರವರು ಕನಕಪುರ ಇವರ ನ್ಯಾಯಾಲಯದಲ್ಲಿ**

**ಸಿಸಿ ಸಂಖ್ಯೆ : 1212/2017**

**ಪಿರ್ಯಾದುದಾರರು :** ರಾಜ್ಯದ ಪರ ಕೋಡಿಹಳ್ಳಿ ಪೊಲೀಸ್ ಠಾಣೆ

– ವಿರುದ್ದ –

**ಆರೋಪಿತರು** : ಮಲ್ಲೇಶ ಬಿನ್ ಮಲ್ಲಯ್ಯ

48 ವರ್ಷ, ಬರಡನಹಳ್ಳಿ ಗ್ರಾಮ

ಕಸಬಾ ಹೋಬಳಿ, ಕನಕಪುರ ತಾಲ್ಲೂಕು

## ದೋಷಾರೋಪಣೆ

**ಶ್ರೀಮತಿ. ಲತಾಶ್ರೀ ಬಿ.ವಿ., ಬಿ.ಎ.ಎಲ್.,ಎಲ್.ಬಿ ಒಂದನೇ ಅಪರ ನ್ಯಾಯಿಕ ದಂಡಾಧಿಕಾರಿಗಳು, ಕನಕಪುರ, ಆದ ನಾನು ನಿಮ್ಮ ಮೇಲೆ ದೋಷಾರೋಪಣೆ ಏನೆಂದರೆ:-**

ದಿನಾಂಕ: 09/03/2017 ರಂದು ಬೆಳಗಿನ ಜಾವ 04-30 ಗಂಟೆ ಸಮಯದಲ್ಲಿ ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಮಾನ್ಯ ನ್ಯಾಯಾಲಯದ ವ್ಯಾಪ್ತಿಗೆ ಒಳಪಡುವ ಕೋಡಿಹಳ್ಳಿ ಟೌನಿನಲ್ಲಿರುವ ಯುಕೋ ಬ್ಯಾಂಕ್ ಮುಂಭಾಗದಲ್ಲಿ ಆರೋಪಿಯಾದ ನೀವು ಬ್ಯಾಂಕಿನ ಮುಂಭಾಗದಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಸುತ್ತಾಡಿ ಕಳ್ಳತನ ಮಾಡಲು ಹೊಂಚು ಹಾಕುತ್ತಿದ್ದು, ಆಗ ಚಾಸಾ-01 ಹಾಗೂ 02 ಧನಂಜಯ ಮತ್ತು ರುದ್ರಪ್ಪ ರವರು ಬ್ಯಾಂಕಿನ ಹತ್ತಿರ ಹೋಗಿ ನೋಡುತ್ತಿದ್ದಂತೆ ಆರೋಪಿಯಾದ ನೀವು ಓಡಿಹೋಗಿ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದು, ಸದರಿ ನಿಮ್ಮ ಕೃತ್ಯವು ಕರ್ನಾಟಕ ಪೋಲೀಸ್ ಕಾಯ್ದೆ ಕಲಂ 96(ಬಿ) ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಮಾಡಿರುತ್ತೀರಿ.

ಸದರಿ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರೀ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ಆರೋಪಣೆಯನ್ನು ಈ ದಿನ ದಿನಾಂಕಃ 17.04.2026 ರಂದು ಆರೋಪಿತರಿಗೆ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆವರ ಉತ್ತರಗಳನ್ನು ಯಥಾವತ್ತಾಗಿ ದಾಖಲಿಸಿದೆ)

**ಮೊದಲನೇ ಅಪರ ಸಿಜೆ ಮತ್ತು ಜೆಎಂಎಫ್‌ಸಿ**

**ನ್ಯಾಯಾಲಯ, ಕನಕಪುರ**

**ಆರೋಪಿಯ ಹೇಳಿಕೆ**

ಪ್ರಶ್ನೆ-1 ಇದೀಗ ಓದಿ ಹೇಳಿದ ದೋಷಾರೋಪಣೆ ನಿಮಗೆ ಅರ್ಥವಾಯಿತೇ?

ಉತ್ತರಃ-

ಪ್ರಶ್ನೆ-2 ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬಯಸುವಿರಾ?

ಉತ್ತರಃ-

(ದಿನಾಂಕಃ 17.04.2026 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ದೃಡೀಕರಿಸಿದೆ.)

**ಮೊದಲನೇ ಅಪರ ಸಿಜೆ ಮತ್ತು ಜೆಎಂಎಫ್‌ಸಿ**

**ನ್ಯಾಯಾಲಯ, ಕನಕಪುರ**

ಆರೋಪಿಯ ಸಹಿ :